**<u>ಸಿವಿಲ್ ನ್ಯಾಯಾಧೀಶರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಬೈಂದೂರು</u>**

**ಸಿ.ಸಿ. ನಂ. 1702 /2023** **ಪಿ.ಡಬ್ಲೂ - 1**

ಸಾಕ್ಷಿದಾರರ ಹೆಸರು - ಶ್ರೀನಿವಾಸ

ತಂದೆಯ ಹೆಸರು - ಶಂಕರ ಖಾರ್ವಿ

ಪ್ರಾಯ - 34 ವರ್ಷ

ವಾಸ - ಬೈಂದೂರು

ದಿನಾಂಕಃ 14-03-2025 ರಂದು ಸಾಕ್ಷಿಯನ್ನು ಕರೆಯಿಸಿ ವಿಧಿಬದ್ಧವಾಗಿ ಪ್ರಮಾಣ ವಚನ ಭೋದಿಸಲಾಯಿತು.

ನಾನು ಫಿರ್ಯಾದನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ. ಈ ವಿಷಯವಾಗಿ ನಾನು ಪ್ರತ್ಯೇಕ ಪ್ರಾಮಾಣೀಕೃತ ಸಾಕ್ಷ್ಯವನ್ನು ನೀಡಿರುತ್ತೇನೆ.

ಮುಖ್ಯ ವಿಚಾರಣೆ ಃ ಶ್ರೀ ಎ.ಎಮ್.ಎಸ್. ವಕೀಲರಿಂದ

1. ಆರೋಪಿ ನೀಡಿದ ಸಿಂಡಿಕೇಟ್ ಬ್ಯಾಂಕ್ ಚೆಕ್ಕನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-1 ಎಂದು ಗುರುತಿಸಲಾಯಿತು.
2. ಬ್ಯಾಂಕ್‌ನವರು ನೀಡಿದ ಮೆಮೋವನ್ನು ನಿಪಿ-2 ಎಂದು ಗುರುತಿಸಲಾಯಿತು.
3. ದಿಃ 17.07.2021 ರಂದು ವಕೀಲರ ಮೂಲಕ ಕಳುಹಿಸಿದ ನೋಟೀಸಿನ ಕಚೇರಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು ಗುರುತಿಸಲಾಯಿತು.
4. ಅಂಚೆ ಸ್ವೀಕೃತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-4 ಎಂದು ಗುರುತಿಸಲಾಯಿತು.
5. ಸಾಲದ ಅರ್ಜಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-5 ಎಂದು ಗುರುತಿಸಲಾಯಿತು.
6. ಪ್ರಾಮೀಸರಿ ನೋಟ್ ನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 6 ಎಂದು ಗುರುತಿಸಲಾಯಿತು.
7. ನೊಂದಣಿಯ ಧೃಡೀಕರಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-7 ಎಂದು ಗುರುತಿಸಲಾಯಿತು.
8. ವಕೀಲರ ನೋಟಿಸ್ಸಿಗೆ ನೀಡಿರುವ ಪ್ರತ್ಯುತ್ತರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-8 ಎಂದು ಗುರುತಿಸಲಾಯಿತು.

ಮುಂದುವರಿದ ಮುಖ್ಯ  ವಿಚಾರಣೆಗೆ ಸಮಯವಕಾಶ ಕೋರಿದ್ದರಿಂದ ಸಮಯಾವಕಾಶ ನೀಡಲಾಯಿತು.

ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು

ಓದಿ ಹೇ. ಕೇ. ಸರಿ ಇದೆ.

**ಸಿವಿಲ್ ನ್ಯಾಯಾದೀಶರು**
**ಮತ್ತು ಜೆ.ಎಂ.ಎಫ್.ಸಿ. ಬೈಂದೂರು**